# ಪ್ರಥಮ ದರ್ಜೇ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಶಹಾಬಾದ

**CC No. 465/2023**

**CW: 02 PW : 01**

## ಸಾಕ್ಷಿಯನ್ನು ಪ್ರಮಾಣೀಕರಿಸಿದ ದಿನಾಂಕ : 03.07.2025

| | |
|---|---|
| ಹೆಸರು | : ಸಿಕಂದರ ಪವಾರ |
| ತಂದೆಯ ಹೆಸರು | : ಬಾಬು |
| ವಯಸ್ಸು | : 38 |
| ಉದ್ಯೋಗ | : ಕೂಲಿ |
| ವಾಸಸ್ಥಳ | : ದೇವನತೆಗನೂರು |

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ನನಗೆ ಚಾಸಾ-3, 4 ಹಾಗೂ 7 ಇವರ ಪರಿಚಯ ಇರುವುದಿಲ್ಲ. ಈ ಹಂತದಲ್ಲಿ ಸಾಕ್ಷಿದಾರರಿಗೆ ಕಡತದಲ್ಲಿರುವ ಒಂದು ದಾಖಲೆಗಳನ್ನು ತೋರಿಸಿದ್ದು, ಅದು ಪಂಚನಾಮೆಯಾಗಿದ್ದು, ಅದನ್ನು ನಿ.ಪಿ.1 ಎಂದು, ಅದರ ಮೇಲಿರುವ ಸಾಕ್ಷಿದಾರರ ಸಹಿಯನ್ನು ನಿ.ಪಿ.1 (ಎ) ನಿಶಾನೆಗೊಳಿಸಲಾಯಿತು. ಸದರಿ ಸಹಿಯನ್ನು ನಾನು ಯಾವ ಕಾರಣಕ್ಕೆ ಮಾಡಿದ್ದೇನೆ ಹೇಳಲು ಬರುವುದಿಲ್ಲ ಹಾಗೂ ದಿನಾಂಕ, ಸಮಯವನ್ನು ಹೇಳಲು ಬರುವುದಿಲ್ಲ. ನನ್ನ ಮತ್ತು ಚಾಸ-3 ಇವರ ಸಮಕ್ಷಮ ಪೋಲೀಸರು ಯಾವುದೇ ಪಂಚನಾಮೆ ಮಾಡಿರುವುದಿಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ಪಾಟೀ ಸವಾಲು : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ದಿ.30/07/2023 ರಂದು ಮಧ್ಯಾಹ್ನ 1 ರಿಂದ 2 ಗಂಟೆಯವರೆಗೆ ನನ್ನ ಮತ್ತು ಚಾಸಾ-3 ಇವರ ಸಮಕ್ಷಮ ಚಾಸಾ-4 ಇವರು ತೋರಿಸಿರುವ ಫಿರ್ಯಾದಿ ಮನೆ ಮುಂದೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆ ಸಮಯಕ್ಕೆ ಚಾಸಾ-3 ಮತ್ತು ನಾನು ಹಾಜರಿದ್ದು ಸದರಿ ಪಂಚನಾಮೆ ಮೇಲೆ ಸಹಿಯನ್ನು ಮಾಡಿರುತ್ತೇವೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ**

**CC No. 465/2023**
**CW: 02 PW : 01**

ಈ ಹಂತದಲ್ಲಿ ಆರೋಪಿ ಪರ ವಕೀಲರು ಪಾಟೀ ಸವಾಲು ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ : ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ ಇದೆ.**

**Sd/-**
**ಪ್ರ.ದ.ನ್ಯಾ.ದಂ ಗಳು, ಶಹಾಬಾದ**